ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮಗಳಿಗೆ ತಿದ್ದುಪಡಿ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿ): ಮಾನ್ಯ ಅಧ್ಯಕ್ಷರೆ,

"ಇಲಾಖಾ ವಿಷಯ ಸಮಿತಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವಿಧಾನಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆಯ 293ರಿಂದ 300ರವರೆಗಿನ ನಿಯಮಗಳನ್ನು ರದ್ದುಪಡಿಸುವ ಪ್ರಸ್ತಾವನೆಯನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವನೆ ಏನೆಂದರೆ,

"ಇಲಾಖಾ ವಿಷಯ ಸಮಿತಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ವಿಧಾನ ಸಭೆಯ ಕಾರ್ಯ ವಿಧಾನ ಮತ್ತು ನಡವಳಿಕೆಯ 293ರಿಂದ 300ರ ವರೆಗಿನ ನಿಯಮಗಳನ್ನು ರದ್ದು ಪಡಿಸುವ ಪ್ರಸ್ತಾವನೆಯನ್ನು ಈ ಸದನವು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಅಧ್ಯಕ್ಷರು: ಈಗ ಸದನವನ್ನು ಮುಂದೂಡಿ ಪುನಃ ಸಂಜೆ 4–30 ಗಂಟೆಗೆ ಸೇರಲಾಗುವುದು.

(ಸದನವನ್ನು ಮಧ್ಯಾಹ್ನ 3 ಗಂಟೆ 2 ನಿಮಿಷಕ್ಕೆ ಮುಂದೂಡಿ ಪುನಃ ಸಂಜೆ 4–30 ಗಂಟೆಗೆ ಸೇರಲು ನಿಶ್ಚಯಿಸಿತು.)